# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ ದಿನಾಂಕ : DATE : 1/7/2020

### ವೈದ್ಯೆಗೆ ಸೋಂಕು, ಸಂಸದ ಸಚಿವರಿಗೂ ಆತಂಕ

ಬೆಂಗಳೂರು: ಕೋವಿಡ್ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿರುವ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಮಂಗಳವಾರ ಓರ್ವ ವೈದ್ಯೆ ಹಾಗೂ 11 ಮಂದಿ ನರ್ಸ್‌ಗಳಿಗೆ ಕರೊನಾ ಸೋಂಕು ದೃಢಪಟ್ಟಿದೆ. ಸೋಂಕಿತ ವೈದ್ಯೆ ಎರಡು ದಿನಗಳ ಹಿಂದೆ ಆಸ್ಪತ್ರೆಯಲ್ಲಿ ನಡೆದ ಸಂಸದರು, ಸಚಿವರು ಹಾಗೂ ಶಾಸಕರನ್ನು ಒಳಗೊಂಡ ಸಭೆಯಲ್ಲಿ ಪಾಲ್ಗೊಂಡಿದ್ದರೆನ್ನಲಾಗಿದ್ದು, ಅವರಿಗೆಲ್ಲ ಭಯ ಆವರಿಸಿದೆ. ಸಭೆಯಲ್ಲಿ ಸಂಸದ ತೇಜಸ್ವಿಸೂರ್ಯ, ಸಚಿವ ಆರ್.ಅಶೋಕ್, ಶಾಸಕ ಎಸ್.ಆರ್. ವಿಶ್ವನಾಥ್ ಹಾಗೂ ಆಸ್ಪತ್ರೆಯ ಕೆಲ ವೈದ್ಯಾಧಿಕಾರಿಗಳು ಪಾಲ್ಗೊಂಡಿದ್ದರು. ಆದರೆ, ಇವರೆಲ್ಲ ಕ್ವಾರಂಟೈನ್‌ಗೆ ಒಳಗಾಗುವ ಬಗ್ಗೆ ಈವರೆಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ. ಸೋಂಕಿತ ವೈದ್ಯೆಯ ಪತಿಗೆ ಸೋಂಕು ದೃಢಪಟ್ಟ ಹಿನ್ನೆಲೆಯಲ್ಲಿ ವೈದ್ಯೆಯನ್ನು ಪರೀಕ್ಷೆಗೆ ಒಳಪಡಿಸಲಾಗಿತ್ತು. ವೈದ್ಯೆಗೆ ರೋಗ ಲಕ್ಷಣ ರಹಿತರಾಗಿದ್ದು, ಮನೆಯಲ್ಲೇ ಕ್ವಾರಂಟೈನ್‌ಗೆ ಒಳಗಾಗಿದ್ದಾರೆ. ಇವರೂ ಸೇರಿದಂತೆ ಆಸ್ಪತ್ರೆಯಲ್ಲಿ ಈವರೆಗೂ 8 ವೈದ್ಯರು, 12 ಶುಶ್ರೂಷಕಿಯರು ಹಾಗೂ 3 ಗ್ರೂಪ್ ಡಿ ನೌಕರರು ಸೋಂಕಿಗೆ ಒಳಗಾಗಿದ್ದಾರೆ. ಅಗ್ನಿಶಾಮಕ ಸಿಬ್ಬಂದಿ, ಪಿಎಸ್‌ಐಗೆ ಸೋಂಕು: ಅಗ್ನಿಶಾಮಕ ದಳದ ಅಧಿಕಾರಿ, ಉಪ್ಪಾರಪೇಟೆ ಪೊಲೀಸ್ ಠಾಣೆ ಪಿಎಸ್‌ಐಗೂ ಮಂಗಳವಾರ ಕರೊನಾ ಸೋಂಕು ದೃಢಪಟ್ಟಿದೆ.